ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಆಯುಕ್ತರವರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು–560 001.
ದಿನಾಂಕ:03–10–2020.

DTE-ADMI0ACM2/15/2020

## –:: ಸು ತ್ತೋಲೆ::–

**ವಿಷಯ:** 2020–21ನೇ ಸಾಲಿನ ಡಿಪ್ಲೋಮಾ ಪ್ರವೇಶ – ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರವೇಶಾವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** 1. ಈ ಕಛೇರಿಯ ಪ್ರವೇಶಾಧಿಸೂಚನೆಯ ದಿ:29–08–2020.
2. ಹಲವು ಖಾಸಗಿ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳ ಮನವಿಗಳು.

–0000000–

2020–21ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರವೇಶಕ್ಕೆ ಅಂತಿಮ ದಿನಾಂಕ:30–09–2020 ಎಂದು ಉಲ್ಲೇಖ(1)ರ ಈ ಕಛೇರಿಯ ಪ್ರವೇಶಾಧಿಸೂಚನೆಯಲ್ಲಿ ನಿಗಧಿಪಡಿಸಲಾಗಿತ್ತು.

ಉಲ್ಲೇಖ(2)ರ ಪತ್ರಗಳಲ್ಲಿ ಹಲವು ಪಾಲಿಟೆಕ್ನಿಕ್‌ಗಳಲ್ಲಿ ಇನ್ನೂ ಅನೇಕ ಸ್ಥಾನಗಳು ಖಾಲಿ ಇರುವುದಾಗಿ ಸಂಬಂಧಿಸಿದ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರು ಮಾಹಿತಿ ನೀಡಿ ಅವಧಿ ವಿಸ್ತರಿಸಬೇಕೆಂದು ಕೋರಿರುವುದರಿಂದ ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪರಿಗಣಿಸಿ **ಪ್ರವೇಶಾವಧಿಯನ್ನು ದಿ:17–10–2020 ರವರೆಗೆ ವಿಸ್ತರಿಸಲಾಗಿದೆ.**

ಪ್ರಯುಕ್ತ, ಪ್ರವೇಶಾವಧಿಯನ್ನು ವಿಸ್ತರಿಸಲಾದ ಅವಧಿಯಲ್ಲಿ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಒಟ್ಟಾರೆ ಶೇ.35 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ವಿಸ್ತರಿಸಲಾದ ಪ್ರವೇಶಾವಧಿಯನ್ನು **ಆಯಾ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.** ಕೋವಿಡ್–19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ. **ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್: http://dtek.karnataka.gov.in** ನ್ನು ನೋಡುವುದು.

| |
|---|
| ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ. |

ನಿರ್ದೇಶಕರು,

*ಇವರಿಗೆ,*

*ಎಲ್ಲಾ ಖಾಸಗಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ – ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ*

ಪ್ರತಿ ಇವರಿಗೆ ಮಾಹಿತಿಗಾಗಿ:

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಯವರ ಆಪ್ತಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
5. ಇ–ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಡಿಪಿಪಿ(2) ವಿಭಾಗಕ್ಕೆ
7. ಇಆರ್‌ಎಸ್(3) ವಿಭಾಗಕ್ಕೆ.
8. ಕಛೇರಿ ಪ್ರತಿ.